ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

www.uni-mysore.ac.in

## ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು
ದಿನಾಂಕ 28.12.2023

ಸಂಖ್ಯೆ:ಜಿಎಲ್5/33(1)/2021-22

# ಸು ತ್ತೋ ಲೆ

ವಿಷಯ: ಮಾಹಿತಿ ಹಕ್ಕು ಅಧಿನಿಯಮ 2005ರ ಪ್ರಕರಣ 04ರ ಅನುಷ್ಠಾನದ ಬಗ್ಗೆ.

ಉಲ್ಲೇಖ:1. ಸರ್ಕಾರದ ಅಧೀನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ(ವಿಶ್ವವಿದ್ಯಾಲಯಗಳು-2 ಮತ್ತು ಸಾಮಾನ್ಯ-2), ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿ ಕಟ್ಟಡ, 06ನೇ ಮಹಡಿ, ಬೆಂಗಳೂರು ಇವರ ಪತ್ರ ಸಂಖ್ಯೆ:ಇಡಿ 21 ವಿವಿಧ 2023(ಭಾ-4) ದಿನಾಂಕ: 18.10.2023

2. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ(ಆಡಳಿತ ಸುಧಾರಣೆ), ಕರ್ನಾಟಕ ಸರ್ಕಾರದ ಸಚಿವಾಲಯ,ಬಹುಮಹಡಿಗಳ ಕಟ್ಟಡ ಬೆಂಗಳೂರು ಇವರ ಪತ್ರ ಸಂಖ್ಯೆ: ಸಿಆಸುಇ(ಆಸು)117 ಆರ್‌ಟಿಐ 2023, ದಿ:22.09.2023
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಆಸುಇ(ಆಡಳಿತ ಸುಧಾರಣೆ), ಕರ್ನಾಟಕ ಸರ್ಕಾರದ ಸಚಿವಾಲಯ,ಬಹುಮಹಡಿಗಳ ಕಟ್ಟಡ ಬೆಂಗಳೂರು ಇವರ ಪೂರ್ವಭಾವಿ ಸಭಾನಡಾವಳಿ ದಿನಾಂಕ: 07.09.2023

*****

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಆಸುಇ ಆಡಳಿತ ಸುಧಾರಣೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಮಾಹಿತಿ ಹಕ್ಕು ಅಧಿನಿಯಮ 2005ರ ಪರಿಣಾಮಕಾರಿ ಅನುಷ್ಠಾನ ಹಾಗೂ ಮಾಹಿತಿ ಹಕ್ಕು ಅಧಿನಿಯಮ, 2005ರ ಕಲಂ(4)ರ ಅನುಷ್ಠಾನದ ಕುರಿತು ದಿನಾಂಕ:07.09.2023ರಂದು ನಡೆದ ಪೂರ್ವಭಾವಿ ಸಭೆಯ ನಡಾವಳಿಯನ್ನು ವಿಶ್ವವಿದ್ಯಾನಿಲಯದ ಜಾಲತಾಣದಲ್ಲಿ (www.uni-mysore.ac.in) ಪ್ರಕಟಿಸಲಾಗಿದ್ದು, ವಿಶ್ವವಿದ್ಯಾನಿಲಯದ ಎಲ್ಲಾ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಕಡ್ಡಾಯವಾಗಿ ಪಾಲಿಸುವಂತೆ ಈ ಮೂಲಕ ಕೋರಲಾಗಿದೆ.

ಉಪ ಕುಲಸಚಿವ(ಸಾಮಾನ್ಯ)
ಹಾಗೂ ನೋಡಲ್ ಅಧಿಕಾರಿ
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು

ಇವರಿಗೆ:

1. ಅಧ್ಯಕ್ಷರು/ನಿರ್ದೇಶಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಮಾ.ಗಂ.,ಮೈಸೂರು
2. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
3. ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳ ಪ್ರಾಂಶುಪಾಲರು, ಮೈವಿವಿ, ಮೈಸೂರು
4. ನಿರ್ದೇಶಕರು, ಐ.ಸಿ.ಡಿ, ಗಣಕ ವಿಜ್ಞಾನ, ಮಾನಸಗಂಗೋತ್ರಿ, ಮೈಸೂರು -ಸದರಿ ಪತ್ರವನ್ನು ವೆಬ್‌ಸೆಟ್‌ನಲ್ಲಿ ಪ್ರಕಟಿಸಲು ಕೋರಲಾಗಿದೆ.
5. ಮಾನ್ಯ ಕುಲಪತಿ /ಕುಲಸಚಿವರ ಆಪ್ತಸಹಾಯಕರು, ಮೈವಿವಿ, ಮೈಸೂರು
6. ಕಛೇರಿ ಪ್ರತಿ.

07

ಕರ್ನಾಟಕ ಸರ್ಕಾರ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ)

ಸಂಖ್ಯೆ: ಸಿಆಸುಇ (ಆಸು) 117 ಆರ್‌ಟಿಐ 2023
ಇ-ಆಫೀಸ್ ಸಂಖ್ಯೆ: 1089427

ಕರ್ನಾಟಕ ಸರ್ಕಾರದ ಸಚಿವಾಲಯ,
6ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 22-09-2023

ಅನಧಿಕೃತ ಟಿಪ್ಪಣಿ

**ವಿಷಯ:** ಮಾಹಿತಿ ಹಕ್ಕು ಅಧಿನಿಯಮ 2005 ಪ್ರಕರಣ 4 ರ ಅನುಷ್ಠಾನದ ಕುರಿತು ದಿನಾಂಕ: 07-09-2023 ರಂದು ನಡೆದ ಪೂರ್ವಭಾವಿ ಸಭೆಯ ಕುರಿತು.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಆಸುಇ ಆಡಳಿತ ಸುಧಾರಣೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಮಾಹಿತಿ ಹಕ್ಕು ಅಧಿನಿಯಮ , 2005ರ ಪರಿಣಾಮಕಾರಿ ಅನುಷ್ಠಾನ ಹಾಗೂ ಮಾಹಿತಿ ಹಕ್ಕು ಅಧಿನಿಯಮ , 2005ರ ಕಲಂ (4)ರ ಅನುಷ್ಠಾನದ ಕುರಿತು ದಿನಾಂಕ: 07-09-2023 ರಂದು ನಡೆದ ಪೂರ್ವಭಾವಿ ಸಭೆಯ ನಡವಳಿ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ನಡವಳಿಯ ಅನುಸಾರ ಕೂಡಲೇ ಅಗತ್ಯ ಕ್ರಮ ಕೈಗೊಳ್ಳುವಂತೆ ಕೋರಿದೆ.

GL-5
Gen II
29/6

Janaki VR 22/9
(ವ್ಯೆ.ಆರ್.ಜಾನಕಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಆಸುಇ(ಆಸು-ತರಬೇತಿ & ಮಾಹಿತಿ ಹಕ್ಕು ಶಾಖೆ

**ಇವರಿಗೆ:**
ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.



Generated from eOffice by Vasanth, ED-GEN2-ASST(VV), ASSISTANT, EDUCATION HIGHER SEC on 20/10/2023 04:31 PM

**ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಇವರ ಅಧ್ಯಕ್ಷತೆಯಲ್ಲಿ "ಮಾಹಿತಿ ಹಕ್ಕು ಅಧಿನಿಯಮ 2005ರ ಪರಿಣಾಮಕಾರಿ ಅನುಷ್ಠಾನಕ್ಕೆ" ಸಂಬಂಧಿಸಿದಂತೆ ದಿನಾಂಕ:07-09-2023ರಂದು ಬೆಳಿಗ್ಗೆ 11.00 ಗಂಟೆಗೆ ಜರುಗಿದ ಪೂರ್ವಭಾವಿ ಸಭೆಯ ನಡವಳಿಗಳು.**

ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಇವರು ಸಭೆಯಲ್ಲಿ ಹಾಜರಿದ್ದ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು. ಸಭೆಯಲ್ಲಿ ಈ ಕೆಳಕಂಡ ಅಂಶಗಳ ಬಗ್ಗೆ ಚರ್ಚಿಸಲಾಯಿತು.

1. ಮಾಹಿತಿ ಹಕ್ಕು ಅಧಿನಿಯಮ 2005ರ ಪರಿಣಾಮಕಾರಿ ನಿರ್ವಹಣೆ ಬಗ್ಗೆ ಎಲ್ಲಾ ಇಲಾಖೆಯ ಸಾರ್ವಜನಿಕ ಮಾಹಿತಿ ಅಧಿಕಾರಿ (Public Information Officer) ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳಿಗೆ (First Appeal Authority) ಆಡಳಿತ ತರಬೇತಿ ಸಂಸ್ಥೆ ಮತ್ತು ಜಿಲ್ಲಾ ತರಬೇತಿ ಸಂಸ್ಥೆಗಳಿಂದ ತರಬೇತಿಯನ್ನು ನೀಡಲಾಗುತ್ತಿದ್ದು, ಇದನ್ನು ಮತ್ತೆ ಪುನರಾವರ್ತಿತಗೊಳಿಸಬೇಕೆಂದು ಸೂಚಿಸಿದರು.

**(ಕ್ರಮ: ಆಡಳಿತ ತರಬೇತಿ ಸಂಸ್ಥೆ, ಮೈಸೂರು)**

2. ಕರ್ನಾಟಕ ಮಾಹಿತಿ ಆಯೋಗದಲ್ಲಿ ಮುಕ್ತಾಯಗೊಂಡಿರುವ 2ನೇ ಮೇಲ್ಮನವಿ ಪ್ರಕರಣಗಳ ಕಡತಗಳ ನಿರ್ವಹಣೆ ಮತ್ತು ವಿಲೇವಾರಿ ಬಗ್ಗೆ ಕರಡು ನಿಯಮವನ್ನು ರಚಿಸಲಾಗಿದೆ ಎಂದು ಕರ್ನಾಟಕ ಮಾಹಿತಿ ಆಯೋಗದ ಕಾರ್ಯದರ್ಶಿಯವರು ಸಭೆಗೆ ತಿಳಿಸಿದರು.
3. ಕರ್ನಾಟಕ ಮಾಹಿತಿ ಆಯೋಗದಲ್ಲಿ ಖಾಲಿಯಿರುವ ಶಾಖಾಧಿಕಾರಿ ಮತ್ತು ಅಧೀನ ಕಾರ್ಯದರ್ಶಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಕೈಗೊಂಡಿರುವ ಕ್ರಮದ ಬಗ್ಗೆ ಸಿಆಸು ಇಲಾಖೆಗೆ ಪತ್ರ ಬರೆಯಲಾಗಿದೆ ಎಂದು ಕಾರ್ಯದರ್ಶಿ, ಕರ್ನಾಟಕ ಮಾಹಿತಿ ಆಯೋಗ ರವರು ತಿಳಿಸಿದರು.
4. ಕರ್ನಾಟಕ ಮಾಹಿತಿ ಆಯೋಗಕ್ಕೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚನೆ ಮಾಡುವ ವಿಷಯವು ಮತ್ತು ಆಯೋಗದಲ್ಲಿ ಹೆಚ್ಚುವರಿ ಹುದ್ದೆಗಳ ಸೃಜನೆ ವಿಷಯವು ಬೇರೆ ಬೇರೆಯಾಗಿರುತ್ತದೆ. ಆದುದರಿಂದ ಈ ಬಗ್ಗೆ ಸೂಕ್ತ ಸಮರ್ಥನೆಯೊಂದಿಗೆ ಪ್ರತ್ಯೇಕವಾದ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸಲು ಕ್ರಮ ಕೈಗೊಳ್ಳುವುದು.

**(ಕ್ರಮ: ಸಿಆಸುಇ (ಆಸು) ಮತ್ತು ಕರ್ನಾಟಕ ಮಾಹಿತಿ ಆಯೋಗ)**

5. ಇಲಾಖೆಗಳಲ್ಲಿ ನೇಮಕಾತಿ ಪ್ರಾಧಿಕಾರವು ಒಬ್ಬರೇ ಇದ್ದರೂ, ಆಯ್ಕೆ ಸಮಿತಿಯಲ್ಲಿ ಇತರೆ ಇಲಾಖೆಗಳ ಅಧಿಕಾರಿಗಳು ಇರುತ್ತಾರೆ. ಆದರೆ, ಕರ್ನಾಟಕ ಮಾಹಿತಿ ಆಯೋಗದಲ್ಲಿ ರಾಜ್ಯ ಮುಖ್ಯ ಮಾಹಿತಿ ಆಯುಕ್ತರು ಕರ್ನಾಟಕ ಮಾಹಿತಿ ಆಯೋಗ ಇವರು ನೇಮಕಾತಿ ಪ್ರಾಧಿಕಾರ ಮತ್ತು ಆಯ್ಕೆ ಪ್ರಾಧಿಕಾರ ಆಗಿರುತ್ತಾರೆ. ನೇಮಕಾತಿ ಪ್ರಕ್ರಿಯೆಯು ಪಾರದರ್ಶಕವಾಗಿರಲು ನೇಮಕಾತಿ ಪ್ರಾಧಿಕಾರದ ಆಯ್ಕೆ ಸಮಿತಿಯಲ್ಲಿ ಇನ್ನೂ 2-3 ಅಧಿಕಾರಿಗಳು ಇರುವ ಬಗ್ಗೆ ಪರಿಶೀಲಿಸುವಂತೆ ಸೂಚಿಸಲಾಯಿತು.

(ಕ್ರಮ: ಕರ್ನಾಟಕ ಮಾಹಿತಿ ಆಯೋಗ)



ASSISTANT EDUCATION HIGHER SEC on 20/10/2023 04:51 PM

6. ಎಲ್ಲಾ ಇಲಾಖೆಗಳು ಸ್ವತ: ತಾವೇ ಗಮನಹರಿಸಿ ಇಲಾಖೆಯಲ್ಲಿನ ಮಾಹಿತಿ ಹಕ್ಕು ಅಧಿನಿಯಮದ 'ನೋಡಲ್ ಅಧಿಕಾರಿ', 'ಸಾರ್ವಜನಿಕ ಮಾಹಿತಿ ಅಧಿಕಾರಿ' ಮತ್ತು 'ಪ್ರಥಮ ಮೇಲ್ಮನವಿ ಪ್ರಾಧಿಕಾರಿ' ಗಳ ವಿವರವನ್ನು ಆಯಾ ಇಲಾಖೆಯ ಕಛೇರಿಗಳ ಸೂಚನಾ ಫಲಕ ಮತ್ತು ಜಾಲತಾಣದಲ್ಲಿ (ಕನ್ನಡ ಮತ್ತು ಆಂಗ್ಲಭಾಷೆಯಲ್ಲಿ) ಪ್ರಕಟಿಸುವಂತೆ ಹಾಗೂ ಈ ಬಗ್ಗೆ ಪ್ರಚಾರ ಮಾಡಿ, ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಸೂಚಿಸಲಾಯಿತು.

**(ಕ್ರಮ: ಎಲ್ಲಾ ಇಲಾಖೆಗಳು ಮತ್ತು ಕಾರ್ಯದರ್ಶಿ, ಕರ್ನಾಟಕ ಮಾಹಿತಿ ಆಯೋಗ)**

7. ಮಾಹಿತಿ ಹಕ್ಕು ಅಧಿನಿಯಮ 2005ರಡಿ ರಾಜ್ಯದ ಎಲ್ಲಾ ಸಾರ್ವಜನಿಕ ಮಾಹಿತಿ ಪ್ರಾಧಿಕಾರಗಳಲ್ಲಿ ಮಾಹಿತಿ ಹಕ್ಕು ಅಧಿನಿಯಮ 2005ರ ಸೆಕ್ಷನ್ 4(1)(a) ಮತ್ತು 4(1)(b)(i)–(xvii)ರವರೆಗಿನ ನಿಯಮಗಳನ್ನು ಕಡ್ಡಾಯವಾಗಿ ಅನುಷ್ಠಾನಗೊಳಿಸುವಂತೆ ಸಂಬಂಧಪಟ್ಟ ಪ್ರಾಧಿಕಾರಗಳಿಗೆ ನಿರ್ದೇಶನ ನೀಡುವಂತೆ ಹಾಗೂ ಅನುಷ್ಠಾನಗೊಳಿಸಿದ ಬಗ್ಗೆ ಅನುಪಾಲನಾ ವರದಿಯನ್ನು ದಿನಾಂಕ: 30-09-2023ರೊಳಗೆ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಆಸುಇ (ಆಡಳಿತ ಸುಧಾರಣೆ) ಇವರಿಗೆ ಸಲ್ಲಿಸುವಂತೆ ಪತ್ರ ಸಂಖ್ಯೆ: ಸಿಆಸುಇ (ಆಸು) 239 ಆರ್‌ಟಿಐ 2023, ದಿನಾಂಕ: 04-09-2023ರ ಪತ್ರದಲ್ಲಿ ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು ಹಾಗೂ ಇಲಾಖಾ ಮುಖ್ಯಸ್ಥರಿಗೆ ಸೂಚಿಸಲಾಗಿದೆ. ಈ ಬಗ್ಗೆ ಮತ್ತೊಮ್ಮೆ ಅರೆ ಸರ್ಕಾರಿ ಪತ್ರವನ್ನು ಹೊರಡಿಸುವುದು.

**(ಕ್ರಮ: ಸಿಆಸುಇ-ಆಸು)**

8. ಕಾರ್ಯದರ್ಶಿಗಳು, ಕರ್ನಾಟಕ ಮಾಹಿತಿ ಆಯೋಗ ಇವರು ಮಾಹಿತಿ ಹಕ್ಕು ಕಾಯ್ದೆಯ 2022-2023ನೇ ಸಾಲಿನ ವಾರ್ಷಿಕ ವರದಿಯನ್ನು ತಯಾರಿಸಲು ಹಲವು ಇಲಾಖೆಗಳು ಮಾಹಿತಿಯನ್ನು ಒದಗಿಸಿರುವುದಿಲ್ಲವೆಂದು ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ಕರ್ನಾಟಕ ಮಾಹಿತಿ ಆಯೋಗವೇ ಸಂಬಂಧಪಟ್ಟ ಇಲಾಖೆಗಳಿಗೆ ಪತ್ರವನ್ನು ಬರೆದು, ಮಾಹಿತಿ ಪಡೆಯುವಂತೆ ತಿಳಿಸಲಾಯಿತು.

**(ಕ್ರಮ: ಕರ್ನಾಟಕ ಮಾಹಿತಿ ಆಯೋಗ)**

9. Online RTI Portal ಉಪಯೋಗಿಸುವ ಎಲ್ಲಾ ಇಲಾಖೆಗಳ ನೋಡಲ್ ಅಧಿಕಾರಿಗಳು, ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿಗಳಿಗೆ ಮತ್ತು ಜಿಲ್ಲಾ ಮಟ್ಟದಲ್ಲಿನ ಅಧಿಕಾರಿಗಳಿಗೂ ಸಹ ನಿಯಮಿತವಾಗಿ ತರಬೇತಿಯನ್ನು ಒದಗಿಸಲು ಕ್ರಮ ಕೈಗೊಳ್ಳುವಂತೆಯೂ, ಈ ಬಗ್ಗೆ Online RTI Cellನ್ನು ಸಿಆಸುಇ (ಇ-ಆಡಳಿತ)ದಡಿ ಸೃಜಿಸಿ, ಈ ಕೋಶವು ತರಬೇತಿಯನ್ನು ಆಯೋಜಿಸಲು ಕ್ರಮಕೈಗೊಳ್ಳುವುದು.

(ಕ್ರಮ: ಸಿಆಸುಇ (ಇ-ಆಡಳಿತ))



Generated from eOffice by Madhura, ED-GEN3-ASST(MA), ASSISTANT, EDUCATION HIGHER SEC on 26/10/2023 04:01 PM

10. ಮಾಹಿತಿ ಹಕ್ಕು ಅಧಿನಿಯಮಕ್ಕೆ ಸಂಬಂಧಿಸಿದ ಪ್ರಕರಣಗಳಲ್ಲಿ ನ್ಯಾಯಾಲಯಗಳು ಹೊರಡಿಸಿರುವ ಆದೇಶಗಳನ್ವಯ ಮಾಹಿತಿ ಒದಗಿಸಬಹುದಾದ ಅಥವಾ ಒದಗಿಸಲು ಸಾಧ್ಯವಿಲ್ಲದಿರುವ ಅಂಶಗಳ ಬಗ್ಗೆ ಮತ್ತು ಆಗ್ಗಿಂದಾಗ್ಗೆ ಕೇಳಲಾಗುವ ಪ್ರಶ್ನೆಗಳ ಕುರಿತು FAQ ತಯಾರಿಸುವಂತೆ ಕರ್ನಾಟಕ ಮಾಹಿತಿ ಆಯೋಗಕ್ಕೆ ಸೂಚಿಸಲಾಯಿತು.

**(ಕ್ರಮ: ಕರ್ನಾಟಕ ಮಾಹಿತಿ ಆಯೋಗ)**

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಡತ ಸಂಖ್ಯೆ:ಸಿಆಸುಇ (ಆಸು) 117 ಆರ್‌ಟಿಐ 2023.

**(ಮುನೀಷ್ ಮೌದ್ಗಿಲ್)**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ
(ಆಡಳಿತ ಸುಧಾರಣೆ).